ಹಾಸನ ಡಿಸ್ಟ್ರಿಕ್ಟು.

ತಾರೀಖು 30ನೇ ಮೇ 1889.

1. ಇದರಿಂದ ಸಮಸ್ತ ಜನಗಳಿಗೂ ತಿಳಿಯಪಡಿಸುವದೇನಂದರೆ,—ಹಾಸನ ಡಿಸ್ಟ್ರಿಕ್ಟು ಮಂಜಿರಾಬಾದು ತಾಲ್ಲೂಕಿನ ಈ ಕೆಳಗೆ ನಮೂದಾಗಲ್ಪಡುವ ಜಮೀನು ಕಾಫೀ ಸಾಗುವಳಿಗೋಸ್ಕರ ಇದರ ಕೆಳಗಿನ ಸ್ಟೇಟ್‌ಮೆಂಟಿನ ಷರಾ ಕಾಲಂನಲ್ಲಿ ನಮೂದಾಗುವ ತಾರೀಖು ಮತ್ತು ಸ್ಥಳದಲ್ಲಿ ಮಂಜಿರಾಬಾದು ತಾಲ್ಲೂಕು ಅಮಲ್‌ದಾರ್‌ರವರ ರೂಬರೂ ಹಾಸನ ಡಿಸ್ಟ್ರಿಕ್ಟು ಡೆಪ್ಯುಟಿ ಕಮ್ಶಿಷನರ್ ಸಾಹೇಬರವರ ಮಂಜೂರಾತಿಗೆ ಪೊಳಪಟ್ಟು ಹರಾಜ್ ಮಾಡಿಸಲ್ಪಡುವದು.

2. ಈ ಹರಾಜ್ ಬಹಿರಂಗವಾಗಿ ದಸ್ತೂರ್ ಷರತ್ತು ಅನುಸರಿಸಿ ಗೊತ್ತಾಗಲ್ಪಟ್ಟ ಎಕರೆಗೆ 10 ರೂಪಾಯಿಗಳ ಮೇಲೆ ಚಡದರಬಾಸ್ತು ಮಾಡುವವರ ಹೆಸರಿಗೆ ಖೈದ ಮಾಡಲ್ಪಡುವದು. ದರಬಾಸ್ತುದಾರನಿಂದ ಹಾಜರ್ಮಾಡಲ್ಪಟ್ಟು ಗೊತ್ತಾಗಲ್ಪಟ್ಟ ಖರೀದಿಯ ನಾಲ್ಕರಲ್ಲಿ ಒಂದು ಭಾಗದ ಡಿಪಾಜಿಟ್ ಹಣವು ದರಬಾಸ್ತುದಾರನ ಹೆಸರಿಗೆ ಹರಾಜು ನಿಂತಪಕ್ಷ ಅವನು ಈ ನೋಟಿಸ್ 4ನೇ ಕ್ಲಾಸ್ ಮೇರಿಗೆ ಕೊಡಬೇಕಾದ ಬೇಕಡಾ 25 ರೂಪಾಯಿ ಹರಾಜ್ ಹಣದ ಡಿಪಾಜಿಟ್ಟಿಗೆ ವಜಾ ಮಾಡಲ್ಪಡುವದು, ಮತ್ತು ಇತರರು ಚಡದರಬಾಸ್ತು ಮಾಡಿ ಅವರಿಗೇನೇ ನಿಂತಪಕ್ಷ ದರಬಾಸ್ತುದಾರನ ಬೇವಣಿಯು ವಾಪಸಿ ಮಾಡಲ್ಪಡುವದು.

3. ಗೊತ್ತಾಗಲ್ಪಟ್ಟ ಖರೀದಿಯ ಸರ್ವೇ ಖರ್ಚನ್ನು ಅಡಗಿಸಿಕೊಂಡು ಯಿರುತ್ತಲ್ಲದೆ ಸೆಂದಲ್ ವಿನಹ ವುಳಿಸಿಕೊಳ್ಳಲ್ಪಟ್ಟ ಜಾತಿ ಯಲ್ಲ ಮರಗಳ ಗವರ್ನಮೆಂಟ್ ಹಕ್ಕನ್ನೂ ಬೇರಿಸಿಕೊಂಡು ಯಿರುತ್ತೆ. ಸೆಂದಲ್ ಜಮಾಗ್ಯೂ ಸರ್ಕಾರದ ಹಕ್ಕಿನದೇ ಆಗಿ ಯಿರುತ್ತೆ.

4. ಚಡದರಬಾಸ್ತುದಾರನು ಹರಾಜ್ ಖೈದಾದ ವಡನೆಯೇ ಬೇಕಾಡಾ 25 ರೂಪಾಯಿಗಳ ಮೇರೆ ಕೊಡಬೇಕಲ್ಲದೆ ಬಾಕಿ ಹಣವನ್ನು ಜಾರಿಯಲ್ಲಿರುವ ರೂಲ್ಸ್ ಅನುಸರಿಸಿ ಹರಾಜಾದ ತಾರೀಖು ಲಾಗಾಯತು 15ನೇ ತಾರೀಖಿನ ದಿವಸದ ಸೂರ್ಯಾಸ್ತಮಯದೊಳಗೆ ಕೊಡಬೇಕು. ಹಾಗೆ ಕೊಡದೇ ಹೋದಲ್ಲಿ ಡಿಪಾಜಿಟ್ ಯಿಟ್ಟ ನೊಬಲೂ ದಂಡವಾಗಿ ತೆಗದುಕೊಳ್ಳುವದಲ್ಲದೆ ಹರಾಜಿನಲ್ಲಿ ತೆಗದುಕೊಂಡವನ ಅವಗುಣಕ್ಕಾಗಿ ಪುನ್ಹ ಹರಾಜ್ ಮಾಡಿಸಲ್ಪಡುವದು. 2ನೇ ಹರಾಜಿನಲ್ಲಿ ಕಮ್ಮಿ ಆಗುವ ಹಣವನ್ನು ಮೊದಲ್ ಹರಾಜ್‌ದಾರನಿಂದ ವಸೂಲ್ಮಾಡಲ್ಪಡುತ್ತೆ.

5. ಈ ರೂಲ್ಸ್ ಅನುಸರಿಸಿ ಹರಾಜ್ ಮಾಡಲ್ಪಟ್ಟ ಜಮೀನು ಮೂರು ವರುಷ ಮುಫತ್ತಾಗಿಯೂ ನಂತರ ಯರಡು ವರುಷ ಅರ್ಧ ಕಂದಾಯಕ್ಕೂ ಆರನೇ ವರುಷದಿಂದ ಪೂರಾ ಕಂದಾಯಕ್ಕೂ ಕೊಡಲ್ಪಡುವದು. ಈ ರಿಯಾಯತಿಯನ್ನು ತೋರಿಸುವದಕ್ಕೆ ಮುಂಚೆ ಚಡ ದರಬಾಸ್ತುದಾರನು ಸದರೀ ಜಮೀನಿನಲ್ಲಿ ಯಿರತಕ್ಕ ಸಾಗುವಳೀಲಾಯಕ ಪ್ರದೇಶವನ್ನು ನಿಜವಾಗಿಯೂ ಗಿಡಹಾಕುವದಕ್ಕೆ ಯತ್ನಪಡದೆ ಅಡವಿಯನ್ನು ತೆಗದು ಮರಗಳನ್ನು ಕಡಿದು ರಾಜೀನಾಮೆ ಕೊಟ್ಟದ್ದೇ ಆದರೆ ಮೊದಲ್ ವರುಷದ ಲಾಗಾಯತು ಪೂರಾ ಕಂದಾಯವನ್ನೂ ಸರಕಾರಕ್ಕೆ ಕೊಡಲು ಬದ್ಧನಾಗಿ ಮುಚ್ಚಳಿಕೆ ಬರೆದು ಕೊಡಬೇಕು.

ಸ್ಟೇಟ್‌ಮೆಂಟ್.

ಸರ್ವೇ ನಂಬರ್.	ದರಬಾಸ್ತುದಾರನ ಹೆಸರು.	ಜಮೀನು ಇರತಕ್ಕ ಗ್ರಾಮದ ಹೆಸರು.	ಚಕ್ಕುಬಂದಿ.	ದರಬಾಸ್ತು ಜಮೀನು.			ಹರಾಜ್ ತಾರೀಖು ಮತ್ತು ಸ್ಥಳ.
				ವಿಸ್ತೀರ್ಣ.		ಆಕಾರ.	
				ಎಕರೆ.	ಗುಂಟೆ.		
33	ಮೆ॥ ಜೆ. ಜೆ. ಕ್ಯಾ॥ ಫರೆಸ್.	ಬೈತಾಪುರ.	ಸರ್ವೆ ನಂಬರು 25ರ ಪೈಕಿ ಹೊಸದಾಗಿ ಫೋಡು ಮಾಡಿದ್ದು.	53	22	ಚಡದರಬಾಸ್ತುದಾರರ ಅಪೇಕ್ಷೆಯಂತೆ ಕಾಯಂದರ ಎಕರೆ 1ಕ್ಕೆ ರೂಪಾಯಿ 1–8–0 ಹಂಗಾಮಿ ರೂಪಾಯಿ 1	1889ನೇ ಜುಲೈ ತಾರೀಖು 25ನೇ ಗುರುವಾರ ಮಂಜಿರಾಬಾದ ತಾಲ್ಲೂಕು ಕಚೇರಿಯಲ್ಲಿ.

ಪಿ. ಎನ್. ಪೂರ್ಣಯ್ಯ,
ಡೆಪ್ಯುಟಿ ಕಮ್ಶಿಷನರ.